# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 2027 (2319)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ಅರಣ್ಯ ಇಲಾಖೆಯ ಭೂಮಿಯನ್ನು ಕಂದಾಯ ಇಲಾಖೆಗೆ ನೀಡುವ ಕುರಿತು

(ಅ) ಕಳೆದ 5 ವರ್ಷಗಳಲ್ಲಿ ಅರಣ್ಯ ಇಲಾಖೆಯು ಎಷ್ಟು ಎಕರೆ ಭೂಮಿಯನ್ನು ಕಂದಾಯ ಇಲಾಖೆಗೆ ಹಸ್ತಾಂತರ ಮಾಡಲಾಗಿದೆ; ಯಾವ ಕಾರಣಕ್ಕೆ ಈ ಅರಣ್ಯ ಭೂಮಿಯನ್ನು ಕಂದಾಯ ಇಲಾಖೆಗೆ ನೀಡಲಾಯಿತು; (ಜಿಲ್ಲಾವಾರು ವಿವರ ನೀಡುವುದು)

(ಆ) ಕಂದಾಯ ಇಲಾಖೆಗೆ ಹಸ್ತಾಂತರ ಮಾಡಿದ ಭೂಮಿಗೆ ಪರ್ಯಾಯವಾಗಿ ಎಷ್ಟು ಎಕರೆ ಭೂಮಿಯನ್ನು ಕಂದಾಯ ಇಲಾಖೆಯಿಂದ ಅರಣ್ಯ ಇಲಾಖೆ ಪಡೆದಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಅರಣ್ಯ ಇಲಾಖೆಯ ಭೂಮಿಯು ಕಂದಾಯ ಇಲಾಖೆಗೆ ಹಸ್ತಾಂತರವಾಗಬೇಕಾದರೆ ಆ ಭೂಮಿಯ ಸ್ವರೂಪ ಹೇಗಿರಬೇಕು; ಈ ಕುರಿತು ನಿಯಮಗಳೇನು?